**ಕರ್ನಾಟಕ ಸರ್ಕಾರ**
**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಗಾಂಧಿನಗರ, ಬೆಂಗಳೂರು – 560 009.**

ಸಂಖ್ಯೆ:ಕಪಂರಾಆ/ಅಭಿವೃದ್ಧಿ/ಗ್ರಂಥಾಲಯ/87/2024 ದಿನಾಂಕ: 13.02.2024
E- Comp. No.:1316774

**ಸುತ್ತೋಲೆ**

**ವಿಷಯ:** ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ "ಓದುವ ಬೆಳಕು" ಕಾರ್ಯಕ್ರಮದ ಅಂಗವಾಗಿ **ಫೆಬ್ರುವರಿ–2024 ರ ಮಾಹೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನ ಮತ್ತು ವಾರ್ಷಿಕ ಪರೀಕ್ಷೆಗಳಿಗೆ ಸಿದ್ಧತೆ'** ಅಭಿಯಾನ ಆಯೋಜಿಸುವ ಕುರಿತು.

**ಉಲ್ಲೇಖ:** ಸುತ್ತೋಲೆ ಸಂಖ್ಯೆ:ಕಪಂರಾಆ/ಅಭಿವೃದ್ಧಿ/ರಾಹೆಮದಿ/27/2024 ದಿನಾಂಕ: 23.01.2024.

* * * *

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ, ಮಕ್ಕಳು ಓದುವುದರಲ್ಲಿ ಮತ್ತು ಕಲಿಕೆಯಲ್ಲಿ ತೊಡಗಿಸಿಕೊಳ್ಳಲು **"ಓದುವ ಬೆಳಕು"** ಕಾರ್ಯಕ್ರಮವನ್ನು ಅನುಷ್ಠಾನಿಸಲು ಈಗಾಗಲೇ ತಿಳಿಸಲಾಗಿದೆ. ಸದರಿ ಕಾರ್ಯಕ್ರಮದ ಮೂಲಕ ಶಾಲಾ ಮಕ್ಕಳನ್ನು, ವಿಶೇಷವಾಗಿ ಗ್ರಾಮೀಣ ಮಕ್ಕಳನ್ನು ವ್ಯವಸ್ಥಿತವಾಗಿ ಕಲಿಕಾ ಕ್ಷೇತ್ರಕ್ಕೆ ಮರಳಿ ತರುವ ಹಾಗೂ ನಿರಂತರತೆಯನ್ನು ಕಾಪಾಡುವ ಗುರಿಯನ್ನು ಹೊಂದಲಾಗಿದೆ. ಅರಿವು ಕೇಂದ್ರಗಳನ್ನು ಗ್ರಾಮೀಣ ಜ್ಞಾನ ಕೇಂದ್ರಗಳನ್ನಾಗಿಸಲು ಗ್ರಂಥಾಲಯಗಳ ನವೀಕರಣ, ಡಿಜಿಟಲೀಕರಣ ಸೇರಿದಂತೆ ವಿವಿಧ ಕ್ರಮಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ.

ಮುಂದುವರೆದು, "ಓದುವ ಬೆಳಕು" ಕಾರ್ಯಕ್ರಮದಡಿಯಲ್ಲಿ ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ ಹಲವಾರು ಅಭಿಯಾನಗಳ ಮೂಲಕ ಪ್ರತಿ ತಿಂಗಳು ಉಪಯುಕ್ತ ಚಟುವಟಿಕೆಯನ್ನು ಆಯೋಜಿಸಲಾಗಿರುತ್ತದೆ. ಹೀಗೆ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುತ್ತಿದೆ. ಅದರಂತೆ, ಉಲ್ಲೇಖಿತ ಸುತ್ತೋಲೆಯಲ್ಲಿ ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಅರಿವು ಕೇಂದ್ರಗಳಲ್ಲಿ **"ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ"** ಅಂಗವಾಗಿ 24 ಜನವರಿ 2024 ರಿಂದ 15ನೇ ಫೆಬ್ರುವರಿ 2024ರ ವರೆಗೆ **ಗ್ರಾಮೀಣ ಒಲಿಂಪಿಕ್ಸ್ (Rural Olymipcs)** ಕ್ರೀಡೆಗಳನ್ನು ಹಾಗೂ ಇತರೆ ಚಟುವಟಿಕೆಗಳನ್ನು ಆಯೋಜಿಸಲು ತಿಳಿಸಲಾಗಿರುತ್ತದೆ. ಆದ್ದರಿಂದ 16ನೇ ಫೆಬ್ರುವರಿ 2024 ರಿಂದ 29 ಫೆಬ್ರುವರಿ 2024ರ ವರೆಗೆ ಅರಿವು ಕೇಂದ್ರಗಳಿಗೆ ಭೇಟಿ ನೀಡುವ ಮಕ್ಕಳಿಗೆ **ಫೆಬ್ರುವರಿ–2024 ರ ಮಾಹೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನ ಮತ್ತು ವಾರ್ಷಿಕ ಪರೀಕ್ಷೆಗಳಿಗೆ ಸಿದ್ಧತೆ'**ಅಭಿಯಾನ ಆಯೋಜಿಸಲು ನಿರ್ಧರಿಸಿದೆ.

**ರಾಷ್ಟ್ರೀಯ ವಿಜ್ಞಾನ ದಿನ ಫೆ. 28 ರಂದು ಇರುತ್ತದೆ. ಈ ದಿನಾಚರಣೆಗೆ ಪೂರಕವಾಗಿ** 16ನೇ ಫೆಬ್ರುವರಿ 2024 ರಿಂದ 28 ಫೆಬ್ರುವರಿ 2024ರ ವರೆಗೆ **ಕೈಗೊಳ್ಳಬಹುದಾದ ಚಟುವಟಿಕೆಗಳು**

- ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಅರಿವು ಕೇಂದ್ರಗಳಲ್ಲಿ ವಿಜ್ಞಾನ ಪುಸ್ತಕಗಳನ್ನು ಪ್ರದರ್ಶಿಸುವುದು.
- ವಿಜ್ಞಾನದ ಪ್ರಮುಖ ಸಂಶೋಧನೆಗಳನ್ನು ಹೆಸರಿಸುವುದು ಹಾಗೂ ಅದಕ್ಕೆ ಕಾರಣರಾದ ವಿಜ್ಞಾನಿಗಳ ಹೆಸರನ್ನು ಹೇಳುವುದು.

- 'ರಾಮನ್ ಎಫೆಕ್ಟ್' ಕುರಿತಂತೆ ಮಾತುಕತೆ ನಡೆಸುವುದು. ವಿಜ್ಞಾನದಲ್ಲಿ ವಿವಿಧ ಪ್ರಯೋಗಗಳಾದ ಗಾಳಿಯ ಒತ್ತಡ, ನಾನು ಕಾಮನಬಿಲ್ಲು ಮೂಡಿಸುವೆ, ಗ್ರಾಮದಲ್ಲಿ ಬಳಸುವ ಅಳತೆ ಮತ್ತು ಮಾಪಕಗಳು ಇತ್ಯಾದಿ ಚಟುವಟಿಕೆಗಳನ್ನು ಕೈಗೊಳ್ಳುವುದು. ಇದಕ್ಕಾಗಿ ವಿಜ್ಞಾನದ ಸ್ಥಳೀಯ ಶಿಕ್ಷಕರನ್ನು ಆಹ್ವಾನಿಸುವುದು. ಈ ಕುರಿತಂತೆ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ರವರು ಸಿದ್ಧಪಡಿಸಿರುವ **"ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರದ ಚಟುವಟಿಕೆಗಳ ಆಯೋಜನೆ ಕೈಪಿಡಿ"** ಯನ್ನು ನೋಡುವುದು ಹಾಗೂ ಚಟುವಟಿಕೆಗಳನ್ನು ಆಯೋಜಿಸುವುದು. ಮಕ್ಕಳಿಗೆ ಆಟ ಹಾಗೂ ಸಣ್ಣ ಸಣ್ಣ ಪ್ರಯೋಗಗಳ ಮೂಲಕ ವಿಜ್ಞಾನವನ್ನು ಕಲಿಸಲು ಪ್ರೋತ್ಸಾಹಿಸುವುದು.
- ವಿಜ್ಞಾನದ ಅಧ್ಯಯನ ಏಕೆ ಅತ್ಯಗತ್ಯ ಎಂಬುದರ ಕುರಿತು ಮಕ್ಕಳಿಂದ ಪ್ರಬಂಧಗಳನ್ನು ಬರೆಸುವುದು.

**ವಾರ್ಷಿಕ ಪರೀಕ್ಷೆಗಳಿಗೆ ಸಿದ್ಧತೆ**

ಫೆಬ್ರುವರಿ ಮಾಹೆಯಲ್ಲಿ ಮಕ್ಕಳು ವಾರ್ಷಿಕ ಪರೀಕ್ಷೆಗೆ ಸಿದ್ಧರಾಗುತ್ತಾರೆ. ಆದ್ದರಿಂದ ಈ ಕೆಳಕಂಡ ಚಟುವಟಿಕೆಗಳನ್ನು ಕೈಗೊಳ್ಳುವುದು.

- ಅವರಲ್ಲಿ ಪರೀಕ್ಷೆಯ ಭಯವನ್ನು ಹೋಗಲಾಡಿಸುವುದು. ಆತ್ಮವಿಶ್ವಾಸದಿಂದ ಪರೀಕ್ಷೆಯನ್ನು ಎದುರಿಸುವುದು. ಮಕ್ಕಳಿಗೆ ಕಷ್ಟದ ವಿಷಯಗಳೆನಿಸುವ ಇಂಗ್ಲೀಷ್, ಗಣಿತ ಮತ್ತು ವಿಜ್ಞಾನ ವಿಷಯದ ಪರೀಕ್ಷೆಗಳನ್ನು ಎದುರಿಸುವ ಬಗ್ಗೆ, ಪರೀಕ್ಷೆ ಸಿದ್ಧತೆ ಕುರಿತಂತೆ ಶಿಕ್ಷಕರು/ ನಿವೃತ್ತ ಶಿಕ್ಷಕರು/ ಸ್ಥಳೀಯ ವಿಷಯ ಪರಿಣಿತರು ಇವರುಗಳಿಂದ ಹಿತನುಡಿ ಹಾಗೂ ಮಾರ್ಗದರ್ಶನ.
- ಪೋಷಕರು, ಶಿಕ್ಷಕರು ಮತ್ತು ಮಕ್ಕಳೊಂದಿಗೆ ಸೌಹಾರ್ದ ಸಭೆ ನಡೆಸುವುದು.

ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸದರಿ ಅಭಿಯಾನದ ಕುರಿತು ಪಂಚತಂತ್ರ 2.0 ತಂತ್ರಾಂಶದ ಈವೆಂಟ್ ಮ್ಯಾನೇಜ್‌ಮೆಂಟ್ ಮಾಡ್ಯೂಲ್‌ನಲ್ಲಿ ಮಾಹಿತಿಯನ್ನು ಇಂದೀಕರಿಸಲು ತಿಳಿಸಿದೆ.

ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ ಮಕ್ಕಳಿಗೆ **ಫೆಬ್ರುವರಿ–2024 ರ** ಮಾಹೆಯಲ್ಲಿ **ರಾಷ್ಟ್ರೀಯ ವಿಜ್ಞಾನ ದಿನ ಮತ್ತು ವಾರ್ಷಿಕ ಪರೀಕ್ಷೆಗಳಿಗೆ ಸಿದ್ಧತೆ'** ಅಭಿಯಾನವನ್ನು ಆಯೋಜಿಸಲು ಕ್ರಮ ಕೈಗೊಳ್ಳುವುದು.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

**<u>ಇವರಿಗೆ:</u>**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

4. ಗ್ರಾಮ ಪಂಚಾಯತಿಯ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ(ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)
5. ಮಾಹಿತಿ ಕೇಂದ್ರ/ವೆಬ್ಸೈಟ್, ಗ್ರಾಅಪ ಇಲಾಖೆ.
6. ಮಾಹಿತಿ ಕೇಂದ್ರ/ವೆಬ್‌ಸೈಟ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.

<u>ಪ್ರತಿಯನ್ನು:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
4. ಕಛೇರಿ ಪ್ರತಿ.